ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬಳ್ಳಾರಿ ಜಿಲ್ಲೆ, ಬಳ್ಳಾರಿ-583101

**OFFICE OF THE DEPUTY COMMISSIONER, BALLARI DISTRICT, BALLARI-583101**

Telephone : 08392-277100. Fax : 08392-272538 Email: dcbellary@gmail.com

**ಸಂ:ಕಂ:ಸಿಬ್ಬಂದಿ-2/100/2017-18** **ದಿನಾಂಕ:10.10.2018**

## :ಅಧಿಸೂಚನೆ:

ಈ ಕಾರ್ಯಾಲಯದ ಅಧಿಸೂಚನೆ ಸಂಖ್ಯೆ.ಕಂ.ಸಿಬ್ಬಂದಿ-2/100/2017-18 ದಿನಾಂಕ:24-3-2018ರಲ್ಲಿ ಬಳ್ಳಾರಿ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ 38 ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿ ಸಲ್ಲಿಸಲು ಆಹ್ವಾನಿಸಲಾಗಿತ್ತು. ಭಾರತ ಚುನಾವಣಾ ಆಯೋಗದ ಪ್ರತಿಕಾ ಪ್ರಕಟಣೆ ಸಂಖ್ಯೆ.ಇಸಿಐ.ಪಿಎನ್.67.2018 ದಿನಾಂಕ:6-10-2018ರಲ್ಲಿ 09 ಬಳ್ಳಾರಿ(ಎಸ್.ಟಿ) ಲೋಕಸಭಾ ಉಪ ಚುನಾವಣೆಯನ್ನು ಘೋಷಣೆ ಮಾಡಿದ್ದು, ಅದರಂತೆ ದಿನಾಂಕ:6-10-2018 ರಿಂದ ಮಾದರಿ ನೀತಿ ಸಂಹಿತೆ ಜಾರಿಯಲ್ಲಿ ಬಂದಿರುತ್ತದೆ.

ಆದ್ದರಿಂದ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವ ಪ್ರಯುಕ್ತ ಗ್ರಾಮಲೆಕ್ಕಿಗರ ನೇರ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರೆಸಬೇಕೆ ಅಥವಾ ನೀತಿ ಸಂಹಿತೆ ಮುಗಿಯುವವರೆಗೆ ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಬೇಕೆ ಎಂಬುವುದರ ಸ್ಪಷ್ಟೀಕರಣ ನೀಡುವಂತೆ ಮುಖ್ಯ ಚುನಾವಣಾಧಿಕಾರಿಗಳು ಬೆಂಗಳೂರು ಇವರಿಗೆ ದಿನಾಂಕ:9-10-2018ರ ಪತ್ರದ ಮೂಲಕ ಕೋರಲಾಗಿತ್ತು. ಮುಖ್ಯ ಚುನಾವಣಾಧಿಕಾರಿಗಳು ಬೆಂಗಳೂರು ಇವರ ಪತ್ರ ಸಂಖ್ಯೆ.ಸಿಅಸುಇ.391.ಮಾನಿಸ(ಅಮುಚುಅ-1).2018 ದಿನಾಂಕ;10-10-2018ರಲ್ಲಿ ಮಾದರಿ ನೀತಿ ಸಂಹಿತೆಯು ಜಿಲ್ಲೆಯಾದ್ಯಂತ ಜಾರಿಯಲ್ಲಿರುವ ಹಿನ್ನಲೆಯಲ್ಲಿ ಗ್ರಾಮಲೆಕ್ಕಿಗರ ನೇಮಕಾತಿ ಪ್ರಕ್ರಿಯೆಯನ್ನು ಚುನಾವಣಾ ಪ್ರಕ್ರಿಯೆ ಪೂರ್ಣಗೊಂಡ ನಂತರ ಕ್ರಮ ವಹಿಸುವಂತೆ ನಿರ್ದೇಶಿಸಿರುತ್ತಾರೆ.

**ಕಾರಣ ಮುಖ್ಯ ಚುನಾವಣಾಧಿಕಾರಿಗಳು ಬೆಂಗಳೂರು ಇವರ ನಿರ್ದೇನದಂತೆ ಮಾದರಿ ನೀತಿ ಸಂಹಿತೆಯು ದಿನಾಂಕ:6-10-2018ರಿಂದ ಜಾರಿಯಾಗಿ ದಿನಾಂಕ:8-11-2018ಕ್ಕೆ ಮುಕ್ತಾಯವಾಗುವ ಪ್ರಯುಕ್ತ ಈಗಾಗಲೇ ಕರೆಯಲಾದ ಗ್ರಾಮಲೆಕ್ಕಿಗರ ಅಧಿಸೂಚನೆಯನ್ನು ತಕ್ಷಣದಿಂದ ಸ್ಥಗಿತಗೊಳಿಸಿದೆ ಮತ್ತು ಮುಂದಿನ ಪ್ರಕ್ರಿಯೆಯನ್ನು ಚುನಾವಣೆ ನೀತಿ ಸಂಹಿತೆ ಮುಗಿದ ನಂತರ ಸೂಚಿಸಲಾಗುವುದು.**

**(ಡಾ: ವಿ.ರಾಮ್‌ಪ್ರಸಾತ್ ಮನೋಹರ್)** ಭಾ.ಆ.ಸೇ  
ಅಧ್ಯಕ್ಷರು  
ಗ್ರಾಮ ಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ  
ಹಾಗೂ ಜಿಲ್ಲಾಧಿಕಾರಿಗಳು,  
ಬಳ್ಳಾರಿ ಜಿಲ್ಲೆ ಬಳ್ಳಾರಿ

**ಪ್ರತಿಯನ್ನು:**

1) ಮಹಾಲೇಖಪಾಲರು ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ
2) ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು ಇವರಿಗೆ ಅವಗಾಹನೆಗಾಗಿ ಸಲ್ಲಿಸಿದೆ
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ಸೇವೆಗಳು) ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಅವಗಾಹನೆಗಾಗಿ ಸಲ್ಲಿಸಿದೆ
4) ಪ್ರಾದೇಶಿಕ ಆಯುಕ್ತರು, ಕಲಬುರಗಿ/ ಬೆಂಗಳೂರು/ ಬೆಳಗಾಂ/ ಮೈಸೂರು ವಿಭಾಗ ರವರಿಗೆ ಅವಗಾಹನೆಗಾಗಿ ಸಲ್ಲಿಸಿದೆ
5) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
6) ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ಬಳ್ಳಾರಿ
7) ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳು ಮತ್ತು ಅಲ್ಪ ಸಂಖ್ಯಾತರ ಇಲಾಖೆ, ಬಳ್ಳಾರಿ
8) ಜಿಲ್ಲೆಯ ಎಲ್ಲಾ ಉಪವಿಭಾಗಾಧಿಕಾರಿಗಳಿಗೆ/ ಜಿಲ್ಲೆಯ ಎಲ್ಲಾ ತಹಶೀಲ್ದಾರರು/ ವಿಶೇಷ ತಹಶೀಲ್ದಾರರುಗಳಿಗೆ ಕಳುಹಿಸಿ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
9) ಜಿಲ್ಲಾ ವಾರ್ತಾ ಮತ್ತು ಪ್ರಚಾರಾಧಿಕಾರಿಗಳು, ಬಳ್ಳಾರಿ ಇವರಿಗೆ ಕಳುಹಿಸುತ್ತಾ, ಸದರಿ ಮಾಹಿತಿಯನ್ನು ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಲು ಕೋರಲಾಗಿದೆ ಹಾಗೂ ಪ್ರಕಟಿಸಿದ ಬಗ್ಗೆ ಪತ್ರಿಕಾ ತುಣುಕುಗಳನ್ನು ಈ ಕಾರ್ಯಾಲಯಕ್ಕೆ ಸಲ್ಲಿಸುವಂತೆ ಸೂಚಿಸಿದೆ.
10) ಈ ಕಾರ್ಯಾಲಯದ ಸೂಚನಾ ಫಲಕಕ್ಕೆ/ ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ